# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ವಾರ್ಡ್ ಸಂಖ್ಯೆ 11/ಸಭೆ/ಪಿಆರ್/ /2021-22 ದಿನಾಂಕ : 19/02/2022

**ಮಾನ್ಯ ಆಯುಕ್ತರು ರವರ ಸುತ್ತೋಲೆ ಸಂಖ್ಯೆ ಬಿ12(5)/ಪಿ.ಆರ್/35/2020-21 ದಿನಾಂಕ 21/09/2020ರ ಆದೇಶದ ಅನ್ವಯ ಕುವೆಂಪುನಗರಕ್ಕೆ ಸಂಬಂಧಿಸಿದಂತೆ ವಾರ್ಡ್ ನಂ 11 ಕುವೆಂಪುನಗರ ವಾರ್ಡ್ ಕಛೇರಿಯಲ್ಲಿ ದಿನಾಂಕ 19/02/2022 ರಂದು ನೋಡೆಲ್ ಅಧಿಕಾರಿ ರವರ ಅಧ್ಯಕ್ಷತೆಯಲ್ಲಿ ಕೈಗೊಂಡ ವಾರ್ಡ್ ಸಮಿತಿ ಸಭೆಯ ನಡವಳಿಗಳು**

**ಹಾಜರಿದ್ದ ಅಧಿಕಾರಿ /ನೌಕರರು**

1. ಶ್ರೀ ಪ್ರಸನ್ನ ವೆಂಕಟೇಶ್, ನೋಡಲ್ ಅಧಿಕಾರಿ
2. ಶ್ರೀ ಸೋಮಶೇಖರ್ ಜಿ.ಎಲ್, ಸಹಾಯಕ ಅಭಿಯಂತರರು & ಕಾರ್ಯದರ್ಶಿ ಹಾಗೂ ಸಂಚಾಲಕರು
3. ಶ್ರೀ ಕೇಶವ ಪಾಣಿ, ಆರೋಗ್ಯಾಧಿಕಾರಿಗಳು
4. ಶ್ರೀ ವಿನಯ್ ಕುಮಾರ್, ಸಹಾಯಕ ಅಭಿಯಂತರರು, ಬಿಡಬ್ಲ್ಯೂಎಸ್ಎಸ್‌ಬಿ
5. ಶ್ರೀ ಶಿವಣ್ಣ, ಕಂದಾಯ ಪರಿವೀಕ್ಷಕರು
6. ಶ್ರೀ ಗೋಪಿ, ತೆರಿಗೆ ವಸೂಲಿಗಾರರು
7. ಶ್ರೀಮತಿ ಕಾಂತಮಣಿ, ಕಿರಿಯ ಆರೋಗ್ಯ ಪರಿವೀಕ್ಷಕರು
8. ಶ್ರೀ ಸುನೀಲ್, ಮಾರ್ಷಲ್
9. ಮಾರ್ಷಲ್ ಮೇಲ್ವಿಚಾರಕರು

**ಹಾಜರಿದ್ದ ಸದಸ್ಯರು/ ಸಾರ್ವಜನಿಕರು**

1. ಶ್ರೀ ನಾಗರಾಜು ಎಸ್.ಎಂ, ಸಿಂಗಾಪುರ
2. ಶ್ರೀ ಮೋಹನ್, ಸಿಂಗಾಪುರ
3. ಶ್ರೀ ವಿನೋದ್, ಪ್ರಕೃತಿ ಲೇಔಟ್
4. ಶ್ರೀ ಹರೀಶ್, ವರದರಾಜನಗರ
5. ಶ್ರೀ ಸೂರಜ್, ವೈಷ್ಣವಿ ಲೇಔಟ್
6. ಶ್ರೀ ಗಿರೀಶ್, ವೈಷ್ಣವಿ ಲೇಔಟ್
7. ಶ್ರೀ ಶಿವಕುಮಾರ್, ಪ್ರಕೃತಿ ಲೇಔಟ್

**ಶ್ರೀ ಪ್ರಸನ್ನ ವೆಂಕಟೇಶ್, ನೋಡೆಲ್ ಅಧಿಕಾರಿ:-** ಸಭೆಗೆ ಹಾಜರಿದ್ದ ಅಧಿಕಾರಿಗಳಿಗೆ ಸ್ವಾಗತವನ್ನು ಕೋರಿದರು. ಹಾಗೂ ವಾರ್ಡಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ ಚರ್ಚಿಸಲು ಎಲ್ಲರನ್ನು ಕೋರಿ ಸಭೆಯಲ್ಲಿ ನಡೆಯುವ ನಡವಳಿಗಳನ್ನು ನಮೂದಿಸಲು ಕಾರ್ಯದರ್ಶಿಗೆ ತಿಳಿಸಿದರು.

ಶ್ರೀ ಹರೀಶ್ ರವರು ಮಾತನಾಡುತ್ತಾ ವರದರಾಜ ಸ್ವಾಮಿ ಬಡಾವಣೆ 1ನೇ ಅಡ್ಡರಸ್ತೆಯಲ್ಲಿ ಕಸ ಗುಡಿಸುವಿಕೆ ಕಾರ್ಯ ಸಮರ್ಪಕವಾಗಿರುವುದಿಲ್ಲವೆಂದು ಸಭೆಯಲ್ಲಿ ತಿಳಿಸಿದ್ದು, ಶ್ರೀಮತಿ ಕಾಂತಮಣಿ ರವರು ಪರಿಶೀಲಿಸಿ ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

ವರದರಾಜ ಸ್ವಾಮಿ ಬಡಾವಣೆಯಲ್ಲಿ ಬೆಸ್ಕಾಂ ವತಿಯಿಂದ ಯು.ಜಿ ಕೇಬಲ್ ಅಳವಡಿಸಲು ರಸ್ತೆಯನ್ನು ಕತ್ತರಿಸಿ ಹಾಗೆಯೇ ಬಿಟ್ಟಿರುವುದರಿಂದ ಸ್ಥಳೀಯ ನಿವಾಸಿಗಳಿಗೆ ಹಾಗೂ ವಾಹನ ಸವಾರರಿಗೆ ತೊಂದರೆ ಉಂಟಾಗುತ್ತಿರುವುದಾಗಿ ತಿಳಿಸಿರುತ್ತಾರೆ.
ನೋಡೆಲ್ ಅಧಿಕಾರಿಗಳು ಮಾತನಾಡುತ್ತಾ ಸಂಬಂಧ ಪಟ್ಟ ಅಧಿಕಾರಿಗಳ ಗಮನಕ್ಕೆ ತರಲು ವಾರ್ಡ್ ಕಾರ್ಯದರ್ಶಿಗೆ ತಿಳಿಸಿದರು.

ವೈಷ್ಣವಿ ಲೇಔಟ್ ರಸ್ತೆಗಳು ಹಾಳಾಗಿದ್ದು, ಆದಷ್ಟು ಬೇಗ ಸದರಿ ರಸ್ತೆಗಳನ್ನು ದುರಸ್ಥಿಪಡಿಸಲು ಕೋರಿದರು. ಈ ಬಗ್ಗೆ ಸಹಾಯಕ ಅಭಿಯಂತರರು ಮಾತನಾಡುತ್ತಾ ಸದರಿ ಬಡಾವಣೆಯ ರಸ್ತೆಯನ್ನು ಅಭಿವೃದ್ಧಿ ಪಡಿಸಲು ಟೆಂಡರ್ ಕರೆಯಲಾಗಿದ್ದು, ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡು ಕಾರ್ಯದೇಶ ನೀಡಿದ ನಂತರ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗುವುದು ಎಂದು ಸಭೆಯಲ್ಲಿ ತಿಳಿಸಿದರು.

ವೈಷ್ಣವಿ ಲೇಔಟ್‌ನಲ್ಲಿ ನೀರಿನ ಕೊರತೆ ಇರುವುದರಿಂದ ಸಾರ್ವಜನಿಕರಿಗೆ ತುಂಬಾ ತೊಂದರೆ ಉಂಟಾಗಿದ್ದು, ಸಮರ್ಪಕವಾಗಿ ನೀರನ್ನು ಪೂರೈಸಲು ಕೋರಿದ್ದು, ಸಭೆಯಲ್ಲಿ ಹಾಜರಿದ್ದ ಬಿ.ಡಬ್ಲ್ಯೂ.ಎಸ್.ಎಸ್.ಬಿ ಸಹಾಯಕ ಅಭಿಯಂತರರು ಪರಿಶೀಲಿಸಿ ಕ್ರಮ ವಹಿಸುವುದಾಗಿ ತಿಳಿಸಿರುತ್ತಾರೆ.

ವಾರ್ಡ್ ಸಂಖ್ಯೆ 09ರ ವ್ಯಾಪ್ತಿಯಲ್ಲಿ ಬರುವ ರಾಘವೇಂದ್ರ ಸ್ವಾಮಿ ಮಠದಲ್ಲಿ ಉತ್ಪತ್ತಿಯಾಗುವ ಘನತ್ಯಾಜ್ಯವನ್ನು ಮಠಕ್ಕೆ ಹೊಂದಿಕೊಂಡಿರುವ ನರಸೀಪುರ ಕೆರೆಗೆ ಹಾಕುತ್ತಿರುವುದರಿಂದ ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳಲು ಕೋರಿದ್ದು, ಸಭೆಯಲ್ಲಿ ಹಾಜರಿದ್ದ ಕಿರಿಯ ಆರೋಗ್ಯ ಪರಿವೀಕ್ಷಕರು ಪರಿಶೀಲಿಸಿ ಕ್ರಮ ವಹಿಸುವುದಾಗಿ ತಿಳಿಸಿದರು.

ಶ್ರೀ ನಾಗರಾಜು ರವರು ವರದರಾಜಸ್ವಾಮಿ ದೇವಸ್ಥಾನದ ರಸ್ತೆಯ ಚರಂಡಿಗಳಲ್ಲಿ ತುಂಬಿರುವ ಹೂಳು ಮತ್ತು ಮಣ್ಣನ್ನು ತೆರವುಗೊಳಿಸಿ ಚರಂಡಿಯ ನೀರು ಸರಾಗವಾಗಿ ಹೋಗಲು ಅನುವು ಮಾಡಿಕೊಡಲು ಕೋರಿದ್ದು, ನೋಡೆಲ್ ಅಧಿಕಾರಿಗಳು ಮಾತನಾಡುತ್ತಾ ವಾರ್ಡ್ ಅಭಿಯಂತರರಿಗೆ ಕ್ರಮ ಕೈಗೊಳ್ಳಲು ತಿಳಿಸಿದರು.

ಕುವೆಂಪುನಗರ ಮುಖ್ಯ ರಸ್ತೆಯಲ್ಲಿ 11ಕೆವಿ ವಿದ್ಯುತ್ ಕಂಬವು ಬೀಳುವ ಹಂತದಲ್ಲಿದ್ದು, ಕೂಡಲೇ ದುರಸ್ಥಿಪಡಿಸಲು ಕೋರಿದ್ದು, ಈ ಬಗ್ಗೆ ನೋಡೆಲ್ ಅಧಿಕಾರಿಗಳು ಸಂಬಂಧ ಪಟ್ಟ ಅಧಿಕಾರಿಗಳ ಗಮನಕ್ಕೆ ತರಲು ತಿಳಿಸಿದರು.

ಶ್ರೀ ವಿನೋದ್ ರವರು ಪ್ರಕೃತಿ ಲೇಔಟ್‌ನಲ್ಲಿ 3 ತಿಂಗಳಿನಿಂದ ಕಾವೇರಿ ನೀರಿನ ಪೂರೈಕೆಯಾಗದೆ ಇರುವುದರಿಂದ ಬಡಾವಣೆಯ ನಿವಾಸಿಗಳಿಗೆ ತೊಂದರೆಯಾಗುತ್ತಿದ್ದು, ಈ ಬಗ್ಗೆ ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿಗಳಿಗೆ ಹಲವು ಬಾರಿ ದೂರು ನೀಡಿದರೂ ಸಹ ದುರಸ್ಥಿಪಡಿಸಲು ಯಾವುದೇ ಕ್ರಮ ಕೈಗೊಂಡಿರುವುದಿಲ್ಲವೆಂದು ದೂರು ನೀಡಿದ್ದು,ಸಭೆಯಲ್ಲಿ ಹಾಜರಿದ್ದ ಬಿ.ಡಬ್ಲ್ಯೂ.ಎಸ್.ಎಸ್.ಬಿ ಸಹಾಯಕ ಅಭಿಯಂತರರು ಈ ಬಗ್ಗೆ ಮೇಲಾಧಿಕಾರಿಗಳೊಂದಿಗೆ ಚರ್ಚಿಸಿ ಕ್ರಮ ವಹಿಸುವುದಾಗಿ ತಿಳಿಸಿದರು.

ನೋಡೆಲ್ ಅಧಿಕಾರಿಗಳು ಈ ಮೇಲ್ಕಂಡ ಅಂಶಗಳ ಬಗ್ಗೆ ಸಭೆಯಲ್ಲಿ ಉಪಸ್ಥಿತರಿದ್ದ ಅಧಿಕಾರಿಗಳು ಹಾಗೂ ಸದಸ್ಯರೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು, ಸದರಿ ವಿಷಯಗಳ ಬಗ್ಗೆ ಕ್ರಮ ಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

-ಸಹಿ-

ನೋಡೆಲ್ ಅಧಿಕಾರಿ ಹಾಗೂ
ಸಹಾಯಕ ಕಾರ್ಯಪಾಲಕ ಅಭಿಯಂತರರು

ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ 11, ಕುವೆಂಪುನಗರ

ಪ್ರತಿಯನ್ನು:

1. ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಮಾನ್ಯ ಜಂಟಿ ಆಯುಕ್ತರು, ಯಲಹಂಕ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
3. ಮಾನ್ಯ ಅಪರ ಆಯುಕ್ತರು, ಘನತ್ಯಾಜ್ಯ ವಿಭಾಗ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
4. ಮುಖ್ಯ ಅಭಿಯಂತರರು, ಯಲಹಂಕ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
5. ಕಾರ್ಯಪಾಲಕ ಅಭಿಯಂತರರು, ಬ್ಯಾಟರಾಯನಪುರ ವಿಭಾಗ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
6. ಸಹಾಯಕ ಕಾರ್ಯಪಾಲಕ ಅಭಿಯಂತರರು, ವಿದ್ಯಾರಣ್ಯಪುರ ಉಪವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಸಲ್ಲಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಸಲ್ಲಿಸಿದೆ.
8. ಕಾರ್ಯದರ್ಶಿ ಹಾಗೂ ಸಂಚಾಲಕರು, ವಾರ್ಡ್ ಕಮಿಟಿ ರವರ ಮಾಹಿತಿಗಾಗಿ ಸಲ್ಲಿಸಿದೆ.